ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

(ಅನುಬಂಧ–I)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಆ) ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ".

(ಅನುಬಂಧ–II)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.